ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
Karnataka State Road Transport Corporation
Service Rules Section

ಸಂಖ್ಯೆ:ಕರಾಸಾ/ಕೇಕ/ಆಡಳಿತ/ಸೇನಿ/ 3/8/2019-20 ದಿನಾಂಕ: 09-03-2020

**ಕಛೇರಿ ಆದೇಶ**

**ವಿಷಯ:** ಅಂಗವಿಕಲರ ಕುಂದುಕೊರತೆ ನಿವಾರಣೆ ಕುರಿತು ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) ರವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸುವ ಬಗ್ಗೆ.

**ಉಲ್ಲೇಖ:**
1. ಸಂಖ್ಯೆ: ಸಾಉಇ 94 ಎಂಇಎ 2019, ದಿನಾಂಕ:16.01.2020
2. ಸರ್ಕಾರದ ಸುತ್ತೋಲೆ ಸಂಖ್ಯೆ: ಮಮಇ 131 ಪಿಹೆಚ್‌ಪಿ 2019 ದಿನಾಂಕ:02-11-2019
3. ಸರ್ಕಾರದ ಸುತ್ತೋಲೆ ಸಂಖ್ಯೆ: ಮಮಇ 131 ಪಿಹೆಚ್‌ಪಿ 2019 ದಿನಾಂಕ:10-10-2019
4. ಸರ್ಕಾರದ ಸುತ್ತೋಲೆ ಸಂಖ್ಯೆ: ಮಮಇ 131 ಪಿಹೆಚ್‌ಪಿ 2019 ದಿನಾಂಕ:10-10-2019
5. ಸಕ್ಷಮ ಪ್ರಾಧಿಕಾರಿಗಳ ಆದೇಶ ದಿನಾಂಕ:02-03-2020

----

ಮೇಲಿನ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಅಂಗವಿಕಲರ ಕುಂದುಕೊರತೆ ನಿವಾರಣೆ ಸಂಬಂಧ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಉಲ್ಲೇಖ-2 ರಿಂದ 4 ರವರೆಗೆ ಸರ್ಕಾರವು ಮಾರ್ಗಸೂಚಿಗಳನ್ನು ನೀಡಿದ್ದು, ಉಲ್ಲೇಖ-1 ರಂತೆ ನಿಗಮದಲ್ಲಿ ಅಂಗವಿಕಲ ಕುಂದುಕೊರತೆ ನಿವಾರಣೆ ಸಂಬಂಧ ಅಧಿಕಾರಿಯನ್ನು ನೇಮಿಸುವಂತೆ ಆದೇಶಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಕರಾರಸಾ ನಿಗಮದಲ್ಲಿ ಅಂಗವಿಕಲರ ಕುಂದುಕೊರತೆ ನಿವಾರಣೆ ಸಂಬಂಧ ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) ರವರನ್ನು ನೋಡಲ್ ಅಧಿಕಾರಿಯನ್ನಾಗಿ ಉಲ್ಲೇಖ-5 ರ ಸಕ್ಷಮ ಪ್ರಾಧಿಕಾರಿಗಳ ಆದೇಶದಂತೆ ನೇಮಕ ಮಾಡಲಾಗಿದೆ.

ಅದರಂತೆ, ಉಲ್ಲೇಖಿತ ಸರ್ಕಾರದ ಸುತ್ತೋಲೆಗಳನ್ವಯ ಅಂಗವಿಕಲರ ಕುಂದುಕೊರತೆ ಸಂಬಂಧ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ಸದರಿ ಸುತ್ತೋಲೆಗಳನ್ನು ಈ ಆದೇಶದೊಂದಿಗೆ ಲಗ್ತತಿಸಲಾಗಿದೆ.

ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ)

ಗೆ,
ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ),
ಕರಾರಸಾನಿಗಮ, ಕೇಂದ್ರ ಕಛೇರಿ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:**
1. ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಾರ್ವಜನಿಕ ಉದ್ದಿಮೆಗಳ ಇಲಾಖೆ ರವರಿಗೆ.
3. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರಿಗೆ.
4. ನಿರ್ದೇಶಕರು(ಸಿ:ಪ)/ ನಿರ್ದೇಶಕರು(ಭ:ಜಾ), ಕರಾರಸಾ ನಿಗಮ, ರವರಿಗೆ.

N.M

..2

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

5. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ವಿಭಾಗೀಯ ಮುಖ್ಯಸ್ಥರುಗಳು, ಕರಾರಸಾ ನಿಗಮ ರವರುಗಳಿಗೆ.
6. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ನೇಮಕ), ಕರಾರಸಾ ನಿಗಮ/ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾ ಸಂಸ್ಥೆ/ವಾಕರಸಾ ಸಂಸ್ಥೆ/ಈಕರಸಾ ಸಂಸ್ಥೆ ರವರಿಗೆ.
7. ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) ರವರಿಗೆ ವರದಿ ಸಲ್ಲಿಸುವುದು.
8. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
9. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
10. ಪ್ರಧಾನ ಕಛೇರಿ ಪತ್ರ ಕಡತ.

1

File No: WCDSEC/131/PHP/2019-WCD_SEC_C-WOMEN AND CHILD WELFARE SEC

# ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 131 ಪಿಹೆಚ್ ಪಿ 2019

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:10.10.2019

**ಸುತ್ತೋಲೆ**

ವಿಷಯ: ಅಂಗವಿಕಲ ವ್ಯಕ್ತಿಗಳ ಅಧಿನಿಯಮ-2016ರ ಕಲಂ 15 ರ ಮೇರೆಗೆ ಅಂಗವಿಕಲರಿಗೆ ಕಾನೂನಿನಲ್ಲಿ ನೀಡಲಾಗಿರುವ ಅರ್ಹತೆಬಾಧ್ಯತೆಗಳ ಬಗ್ಗೆ ಸಮೂಹದಲ್ಲಿ ಅರಿವು ಮೂಡಿಸಲು ಇಲಾಖೆಗಳಲ್ಲಿ ಒಬ್ಬ ಅಧಿಕಾರಿಯನ್ನು ನೇಮಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಂಗವಿಕಲ ವ್ಯಕ್ತಿಗಳ ಅಧಿನಿಯಮ-2016 ದಿ.27.12.2016 ರಿಂದ ಜಾರಿಗೆ ಬಂದಿದ್ದು, ಈ ಅಧಿನಿಯಮದ ಕಲಂ 15(1) ರಲ್ಲಿ ಅಂಗವಿಕಲರಿಗೆ ಕಾನೂನಿನಲ್ಲಿ ನೀಡಲಾಗಿರುವ ಅರ್ಹತೆ, ಹಕ್ಕು ಬಾಧ್ಯತೆಗಳ ಬಗ್ಗೆ ಸಮೂಹದಲ್ಲಿ ಪ್ರಚಾರಪಡಿಸಿ ಅವುಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಹಾಗೂ ವಿಕಲಚೇತನರು ಅವುಗಳನ್ನು ಪಡೆಯುವಂತೆ ಅನುವು ಮಾಡಿಕೊಡಲು ಸರ್ಕಾರ ಒಬ್ಬ ಅಥವಾ ಇನ್ನು ಹೆಚ್ಚಿನ ಸಂಖ್ಯೆಯ ಅಧಿಕಾರಿಗಳನ್ನು ನೇಮಿಸಬೇಕೆಂದು ತಿಳಿಸಲಾಗಿದೆ.

ಕಲಂ-15 (2) ರಲ್ಲಿ ಮೇಲಿನ 1 ನೇ ಕಂಡಿಕೆಯಲ್ಲಿ ಹೇಳಿರುವ ಅಧಿಕಾರಿಗಳು ಸಂಸ್ಥೆಗಳ ಆಶ್ರಯಗಳಲ್ಲಿ ಇರಬಹುದಾದ ಅಂಗವಿಕಲರು ಮತ್ತು ಅಧಿಕ ಆಸರೆ ಅವಶ್ಯವಿರುವ ಅಂಗವಿಕಲರಿಗೆ ಸಲ್ಲಿಸಬೇಕಾದ ಹಕ್ಕುಗಳನ್ನು ಪಡೆಯಲು ಆಗತ್ಯವಾದ ಎಲ್ಲಾ ವ್ಯವಸ್ಥೆಯನ್ನು ಏರ್ಪಡಿಸಬೇಕೆಂದು ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಎಲ್ಲಾ ಇಲಾಖೆಗಳಲ್ಲಿ ಮೇಲಿನ ಕಂಡಿಕೆಗಳ ಅನುಸಾರ ಅಂಗವಿಕಲರಿಗೆ ಕಾನೂನಲ್ಲಿ ನೀಡಲಾಗಿರುವ ಅರ್ಹತೆ ಹಕು ಬಾಧ್ಯತೆಗಳ ಬಗ್ಗೆ ಸಮೂಹದಲ್ಲಿ ಪ್ರಚಾರಪಡಿಸಿ ಅವುಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಹಾಗೂ ಅಂಗವಿಕಲರ ಸೌಲಭ್ಯಗಳನ್ನು ಪಡೆಯುವಂತೆ ಅನುವು ಮಾಡಿಕೊಡಲು ತಮ್ಮ ಇಲಾಖೆಯಲ್ಲಿ ಒಬ್ಬ ಅಧಿಕಾರಿಯನ್ನು ನೇಮಿಸಿ ಆದೇಶ ಹೊರಡಿಸಲು ಹಾಗೂ ಈ ಸಂಬಂಧ ನೇಮಕಮಾಡಿದ ಅಧಿಕಾರಿ ಹೆಸರು, ಪದನಾಮ, ವಿಳಾಸ ಹಾಗೂ ದೂರವಾಣಿ ಸಂಖ್ಯೆ ಇತ್ಯಾದಿ ವಿವರಗಳನ್ನು ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಬೆಂಗಳೂರು ಇವರಿಗೆ ತಿಳಿಸಲು ಕೋರಲಾಗಿದೆ.

(ರಾಕೇಶ್ ಸಿಂಗ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಇಲಾಖೆ, ಬೆಂಗಳೂರು

ಪ್ರತಿಯನ್ನು:

1. ಎಲ್ಲಾ ಇಲಾಖೆಗಳ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಮುಂದಿನ ಕ್ರಮಕ್ಕಾಗಿ.
2. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ನಿರ್ದೇಶನಾಲಯ, ಬೆಂಗಳೂರು.
3. ಕಛೇರಿ ಪ್ರತಿ.

**File No: WCDSEC/131/PHP/2019-WCD_SEC_C-WOMEN AND CHILD WELFARE SEC**

# ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 131 ಪಿಹೆಚ್ ಪಿ 2019

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:10.10.2019

## ಸುತ್ತೋಲೆ

ವಿಷಯ: ಎಲ್ಲಾ ಇಲಾಖೆ, ನಿಗಮ ಮಂಡಳಿಗಳಲ್ಲಿ ಅಂಗವಿಕಲರ ಕುಂದುಕೊರತೆಗಳ ನಿವಾರಣೆಗೆಂದು ಅಧಿಕಾರಿಯನ್ನು ನೇಮಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಂಗವಿಕಲ ವ್ಯಕ್ತಿಗಳ ಅಧಿನಿಯಮ-2016 ಕಲಂ 23 (1)ರಲ್ಲಿ ಎಲ್ಲಾ ಇಲಾಖೆ, ನಿಗಮ, ಮಂಡಳಿಗಳಲ್ಲಿ ಕಲಂ 19 ರಲ್ಲಿ ಅಂಗವಿಕಲರಿಗೆ ವೃತ್ತಿಪರ ತರಬೇತಿಯನ್ನು ಪಡೆಯಲು ಮತ್ತು ಸ್ವತ: ಉದ್ಯೋಗ ಮಾಡಲು ಕಾರ್ಯಕ್ರಮಗಳನ್ನು ಎಲ್ಲಾ ಇಲಾಖೆಗಳು ನಿಗಮ ಮಂಡಳಿಗಳಲ್ಲಿ ರೂಪಿಸಿ ಸೌಲಭ್ಯಗಳನ್ನು ಕಲ್ಪಿಸಲು ತಿಳಿಸಲಾಗಿದ್ದು, ಈ ಹಿನ್ನಲೆಯಲ್ಲಿ ಕುಂದುಕೊರತೆಗಳ ನಿವಾರಣೆಗೆಂದು ಅಧಿಕಾರಿಗಳನ್ನು ನೇಮಿಸಬೇಕು ಮತ್ತು ಅವರ ನೇಮಕಾತಿಯ ಬಗ್ಗೆ ಕೇಂದ್ರದ ಮುಖ್ಯ ಆಯುಕ್ತರು ಮತ್ತು ಆಯಾ ರಾಜ್ಯದ ಆಯುಕ್ತರಿಗೆ ತಿಳಿಸಬೇಕೆಂದು ಸೂಚಿಸಿದೆ.

ಕಲಂ 23(2) ಮೇಲಿನ ಸೆಕ್ಷನ್ 20(4) ರಲ್ಲಿ ಉದ್ಯೋಗ ಮಾಡುತ್ತಿರುವ ಅವಧಿಯಲ್ಲಿ ಉದ್ಯೋಗಿಗೆ ಅಂಗವಿಕಲತೆ ಉಂಟಾದರೆ ಅವರನ್ನು ಕೆಲಸದಿಂದ ತೆಗೆದು ಹಾಕುವಂತಿಲ್ಲ ಅಥವಾ ಹಿಂಬಡ್ತಿ ನೀಡುವಂತಿಲ್ಲವೆಂದೂ ಇರುತ್ತದೆ. ಈ ಅಪವಾದಗಳಡಿ ತೆಗೆದು ಕೊಂಡಿರುವ ಕ್ರಮಗಳ ಬಗ್ಗೆ ಯಾರಿಗಾದರೂ ಆಕ್ಷೇಪಣೆ ಇದ್ದರೆ, ಅವರು ಕುಂದುಕೊರತೆ ಅಧಿಕಾರಿಗಳಿಗೆ ದೂರು ನೀಡಬಹುದು ಸದರಿ ಅಧಿಕಾರಿ ತನಿಖೆ ಮಾಡಿ ಅದರ ನಿರ್ವಹಣೆಗೆ ಸ್ಥಾಪನೆಯ ಅಧಿಕಾರಿಗಳೊಡನೆ ಸಮಾಲೋಚಿಸಿ ಕ್ರಮತೆಗೆದುಕೊಳ್ಳಲು ತಿಳಿಸಲಾಗಿದೆ.

ಸದರಿ ಕಲಂ ಪ್ಯಾರ (3) ರಲ್ಲಿ ಕುಂದು ನಿವಾರಣಾ ಅಧಿಕಾರಿ ಸರ್ಕಾರ ತಿಳಿಸಿರುವ ಮಾದರಿಯಲ್ಲಿ ಎಲ್ಲಾ ದೂರುಗಳ ದಾಖಲೆ ಇಡಬೇಕು ಮತ್ತು ದೂರು ನೀಡಿದ ಎರಡು ವಾರದೊಳಗೆ ವಿಚಾರಣೆ ಮಾಡಬೇಕು ಎಂದು ತಿಳಿಸಲಾಗಿದೆ.

ಕಲಂ ಪ್ಯಾರ (4)ರಲ್ಲಿ ದೂರು ನೀಡಿದ ಉದ್ಯೋಗಿಗೆ ದೂರಿನ ಬಗ್ಗೆ ತೆಗೆದುಕೊಳ್ಳಲಾಗಿರುವ ಕ್ರಮದ ಬಗ್ಗೆ ಅಸಮಾಧಾನ ಇದ್ದರೆ ಅವರು ಜಿಲ್ಲಾ ಮಟ್ಟದ ಅಂಗವಿಕಲರ ಸಮಿತಿಯ ಮುಂದೆ ದೂರನ್ನು ನೀಡಬಹುದೆಂದು ತಿಳಿಸಲಾಗಿದೆ.

ಆದ್ದರಿಂದ ಅಂಗವಿಕಲ ವ್ಯಕ್ತಿಗಳ ಅಧಿನಿಯಮ 2016ರಡಿ ಕಲಂ 23ರಲ್ಲಿ ಅಗತ್ಯಪಡಿಸಿರುವಂತೆ ಎಲ್ಲಾ ಸರ್ಕಾರಿ ಇಲಾಖೆಗಳು ಸಂಸ್ಥೆ, ನಿಗಮ, ಮಂಡಳಿ ಹಾಗೂ ಆಯೋಗಗಳು ಅಂಗವಿಲರ ಕುಂದು ಕೊರತೆ ನಿವಾರಿಸಲು ಅಧಿಕಾರಿಯೊಬ್ಬರನ್ನು ನೇಮಿಸುವಂತೆ ತಿಳಿಸಿದೆ.

(ರಾಕೇಶ್ ಸಿಂಗ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಇಲಾಖೆ, ಬೆಂಗಳೂರು

ಪ್ರತಿಯನ್ನು:

1. ಎಲ್ಲಾ ಇಲಾಖೆಗಳ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಮುಂದಿನ ಕ್ರಮಕ್ಕಾಗಿ.
2. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ನಿರ್ದೇಶನಾಲಯ, ಬೆಂಗಳೂರು

WCDSEC/131/PHP/2019-WCD SEC C-WOMEN AND CHILD WELFARE SEC

# ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 131 ಪಿಹೆಚ್ ಪಿ 2019

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02.11.2019

## ಸುತ್ತೋಲೆ

ವಿಷಯ: ಎಲ್ಲಾ ಇಲಾಖೆ, ನಿಗಮ ಮಂಡಳಿಗಳಲ್ಲಿ ಅಂಗವಿಕಲರ ಕುಂದುಕೊರತೆಗಳ ನಿವಾರಣೆಗೆಂದು ಅಧಿಕಾರಿಯನ್ನು ನೇಮಿಸುವ ಬಗ್ಗೆ.

***

ಎಲ್ಲಾ ಇಲಾಖೆ, ನಿಗಮ ಮಂಡಳಿಗಳಲ್ಲಿ ಅಂಗವಿಕಲರ ಕುಂದುಕೊರತೆಗಳ ನಿವಾರಣೆಗೆಂದು ಅಧಿಕಾರಿಯನ್ನು ನೇಮಿಸುವ ಬಗ್ಗೆ ಸಮಸಂಖ್ಯೆಯ ದಿ.10.10.2019 ರಂದು ಹೊರಡಿಸಲಾಗಿರುವ ಸುತ್ತೋಲೆಯನ್ನು ಮುಂದುವರೆಸುತ್ತಾ ಎಲ್ಲಾ ಸರ್ಕಾರಿ ಇಲಾಖೆಗಳು, ನಿಗಮ ಮಂಡಳಿಗಳು ಹಾಗೂ ಆಯೋಗಗಳಲ್ಲಿ ಸಾರ್ವಜನಿಕ ಕುಂದು ಕೊರತೆಗಳ ನಿವಾರಣೆಗಾಗಿ ಈಗಾಗಲೇ ನೇಮಿಸಲಾಗಿರುವ ಸಾರ್ವಜನಿಕ ಕುಂದುಕೊರತೆ ಅಧಿಕಾರಿಗಳನ್ನೇ ವಿಕಲಚೇತನರ ಕುಂದುಕೊರತೆ ನಿವಾರಣಾ ಅಧಿಕಾರಿಗಳನ್ನಾಗಿ ಪದನಾಮೀಕರಿಸಿ ನೇಮಿಸಲಾಗಿದೆ.

(ರಾಕೇಶ್ ಸಿಂಗ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಇಲಾಖೆ, ಬೆಂಗಳೂರು

**ಪ್ರತಿಯನ್ನು:**

1. ಎಲ್ಲಾ ಇಲಾಖೆಗಳ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಮುಂದಿನ ಕ್ರಮಕ್ಕಾಗಿ.
2. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬೆಂಗಳೂರು.
3. ಕಛೇರಿ ಪ್ರತಿ.

# ಕರ್ನಾಟಕ ಸರ್ಕಾರ

ಸಂಖ್ಯೆ: ಸಾಉಇ 94 ಎಂಇಎ 2019

ಕರ್ನಾಟಕ ಸರ್ಕಾರದ ಸಚಿವಾಲಯ,
2ನೇ ಹಂತ, 7ನೇ ಮಹಡಿ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:16.01.2020.

**ಇಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರ್ವಜನಿಕ ಉದ್ದಿಮೆಗಳ ಇಲಾಖೆ,

**ಇವರಿಗೆ:**

ವ್ಯವಸ್ಥಾಪಕ ನಿರ್ದೇಶಕರು,
ಎಲ್ಲಾ 60 ನಿಗಮ ಮಂಡಳಿಗಳು

ವಿಷಯ: ಎಲ್ಲಾ ನಿಗಮ/ಮಂಡಳಿಗಳಲ್ಲಿ ಅಂಗವಿಕಲರ ಕುಂದುಕೊರತೆಗಳ ನಿವಾರಣೆಗೆಂದು ಅಧಿಕಾರಿಯನ್ನು ನೇಮಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಮಮಇ 131 ಪಿ.ಹೆಚ್.ಪಿ 2019, ದಿನಾಂಕ: 02.11.2019.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸುತ್ತೋಲೆಯನ್ನು ಲಗತ್ತಿಸುತ್ತಾ, ತಮ್ಮ ನಿಗಮ/ಮಂಡಳಿಗಳಲ್ಲಿ ಸಾರ್ವಜನಿಕ ಕುಂದುಕೊರತೆಗಳ ನಿವಾರಣೆಗಾಗಿ ಈಗಾಗಲೇ ನೇಮಿಸಲಾಗಿರುವ ಸಾರ್ವಜನಿಕ ಕುಂದುಕೊರತೆ ಅಧಿಕಾರಿಗಳನ್ನೇ ವಿಕಲಚೇತನರ ಕುಂದುಕೊರತೆ ಅಧಿಕಾರಿಗಳನ್ನಾಗಿ ಪದನಾಮೀಕರಿಸಿ ನೇಮಿಸಬೇಕೆಂದು ತಿಳಿಸಲಾಗಿದೆ.

ತಮ್ಮ ವಿಶ್ವಾಸಿ,

M-Gopalakrishna

(ಎಂ.ಗೋಪಾಲಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರ್ವಜನಿಕ ಉದ್ದಿಮೆಗಳ ಇಲಾಖೆ

16/1/2020

MD
ESt
Gov-841
23/1/2020
21/1/20
21/1